ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 16 ಎಸಿಎಂ(2) 2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:16-07-2019.

## -:: ಸು ತ್ತೋಲೆ ::-

**ವಿಷಯ:** 2019-20ನೇ ಸಾಲಿನ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ 03ನೇ ಸೆಮಿಸ್ಟರ್ / 02ನೇ ವರ್ಷ ಡಿಪ್ಲೋಮಾ ಪ್ರವೇಶ ಸಂಬಂಧ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳಿಗೆ **ಆಫ್-ಲೈನ್ ಕೌನ್ಸಲಿಂಗ್** ಮೂಲಕ ಪ್ರವೇಶ ನೀಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಆದೇಶ ಸಂ. ಇಡಿ 207 ಟಿಜಿಎಲ್ 2016, ದಿ:20-03-2017.
2. ಸರ್ಕಾರದ ಆದೇಶ ಸಂ. ಇಡಿ 161 ಟಿಪಿಇ 2011, ದಿ:15-07-2011.
3. ಸರ್ಕಾರದ ಆದೇಶ ಸಂ. ಇಡಿ 145 ಟಿಪಿಇ 2012, ದಿ:16-06-2012.
4. ಸರ್ಕಾರದ ಪತ್ರ ಸಂ. ಇಡಿ 84 ಟಿಪಿಇ 2014, ದಿ:27-02-2015.
5. ಸರ್ಕಾರದ ಆದೇಶ ಸಂ. ಇಡಿ 35 ಟಿಪಿಇ 2019, ದಿ:03-06-2019.
6. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. ಡಿಟಿಇ/16/ಎಸಿಎಂ(2)/2018-19, ದಿ:15-06-2019.

-000000-

2019-20ನೇ ಸಾಲಿಗೆ ರಾಜ್ಯದ ಹಗಲು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಕರ್ನಾಟಕದಲ್ಲಿ ಎಸ್.ಎಸ್.ಎಲ್.ಸಿ ಹಾಗೂ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಉಲ್ಲೇಖ(6)ರ ಈ ಕಛೇರಿ ಪ್ರವೇಶಾಧಿಸೂಚನೆಯನ್ವಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ ಪ್ರವೇಶ ಪ್ರಕ್ರಿಯೆಯನ್ನು ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್ ಮೂಲಕ ರಾಜ್ಯದ 25 **ನೋಡಲ್ ಸೆಂಟರ್** ಗಳಲ್ಲಿ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿರುತ್ತದೆ.

ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಖಾಲಿ ಉಳಿದಿರುವ ಸೀಟುಗಳನ್ನು **ಆಯಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರು ತಮ್ಮ ಹಂತದಲ್ಲಿಯೇ ಈಗಾಗಲೇ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ ಸೀಟು ಸಿಗದೆ ಇರುವಂತಹ ವಿದ್ಯಾರ್ಥಿಗಳು ಹಾಗೂ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು)** ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳಿಗೆ **ಆಫ್-ಲೈನ್** ಮುಖಾಂತರ ಆಯಾ ಕಾಲೇಜುಗಳಲ್ಲಿ ಖಾಲಿ ಇರುವ ಸೀಟುಗಳಿಗೆ ಅರ್ಜಿಗಳನ್ನು ವಿತರಿಸಿ ಹಾಗೂ ಮೆರಿಟ್ ಪಟ್ಟಿ ತಯಾರಿಸಿ ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ರೋಸ್ಟರ್ ಅನುಗುಣವಾಗಿ ನಿಯಮಗಳನ್ನು ಪಾಲಿಸಿ ತುಂಬಲು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ **ಈ ಕೆಳಕಂಡಂತೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

**ಪ್ರವೇಶಾತಿಗೆ ಸಂಬಂಧಿಸಿದ ವೇಳಾಪಟ್ಟಿ:**

1. **ಅರ್ಜಿ ಪಡೆಯಲು ಹಾಗೂ ಭರ್ತಿ ಮಾಡಿದ ಅರ್ಜಿಯನ್ನು ಸ್ವೀಕರಿಸಲು ವಿಸ್ತರಿಸಲಾದ ದಿ:16-07-2019 ರಿಂದ ದಿನಾಂಕ:30-07-2019ರ ಸಂಜೆ 5.30 ಗಂಟೆಯವರೆಗೆ.**

2. **ದಿನಾಂಕ:31-07-2019ರ ಬೆಳಿಗ್ಗೆ 10.30** ಗಂಟೆಗೆ ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು **MS-EXCEL Format** ನಲ್ಲಿ ತಯಾರಿಸಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವುದು.

3. **ಪ್ರವೇಶಾತಿ ಪ್ರಕ್ರಿಯೆಯ ಸಂದರ್ಶನ ನಡೆಸುವ ದಿನಾಂಕ:31-07-2019 ಮಧ್ಯಾಹ್ನ 02.30 ಗಂಟೆಗೆ**

4. ಅಭ್ಯರ್ಥಿಗಳು ಸೀಟು ಆಯ್ಕೆ ಮಾಡಿಕೊಂಡ ಕಾಲೇಜಿನಲ್ಲಿಯೇ ದಿ:31-07-2019ರ ಸಂಜೆ 05.30 ಗಂಟೆಯ ಒಳಗೆ ಎಲ್ಲಾ ಈ ಕೆಳಕಂಡ ಮೂಲ ದಾಖಲೆಗಳು / ಪ್ರವೇಶ ಶುಲ್ಕದೊಂದಿಗೆ ಪ್ರವೇಶ ಪಡೆಯುವುದು.

**ಅರ್ಜಿ ಪಡೆಯುವ ಹಾಗೂ ಸಲ್ಲಿಸುವ ವಿಧಾನ:**

ಲ್ಯಾಟರಲ್ ಎಂಟ್ರಿ ಸ್ಕೀಂ ಮೂಲಕ 03ನೇ ಸೆಮಿಸ್ಟರ್ / 02ನೇ ವರ್ಷ ಡಿಪ್ಲೋಮಾ ಪ್ರವೇಶ ಬಯಸುವ ಅಭ್ಯರ್ಥಿಗಳು ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ www.dte.kar.nic.in ವೆಬ್‌ಸೈಟ್‌ನ ಮೂಲಕ ಡೌನ್‌ಲೋಡ್ ಮಾಡಿಕೊಂಡು ಅರ್ಜಿಯನ್ನು ಮಾಹಿತಿ ಪುಸ್ತಕದಲ್ಲಿರುವ ಸೂಚನೆಗಳನ್ವಯ ಸಂಪೂರ್ಣ ಭರ್ತಿ ಮಾಡಿ, ಪ್ರವೇಶ ಬಯಸುವ ತಮ್ಮ ಇಚ್ಛೆಗನುಗುಣವಾದ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿಯೇ ಡಿಪ್ಲೋಮಾ ಅರ್ಜಿ ನೋಂದಣಿ ಶುಲ್ಕವನ್ನು (ಸಾಮಾನ್ಯ/2ಎ/2ಬಿ/3ಎ/3ಬಿ = ₹ 100/- & ಪ.ಜಾ/ಪ.ಪಂ/ ಪ್ರವರ್ಗ-1 = ₹ 50/-) ದಿ:30-07-2019 ರ ಸಂಜೆ 5.30 ಗಂಟೆಯ ಒಳಗೆ ನಗದು ರೂಪದಲ್ಲಿ ಪಾವತಿಸಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

**ಪ್ರವೇಶ ಬಯಸುವ ಅಭ್ಯರ್ಥಿಗಳು ಸಂದರ್ಶನ ಸಮಯದಲ್ಲಿ ಈ ಕೆಳಕಂಡ ಎಲ್ಲಾ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.**

ಅ) 02 ವರ್ಷಗಳ ಐ.ಟಿ.ಐ ಅಂಕಪಟ್ಟಿ & ಪ್ರಮಾಣ ಪತ್ರ.
ಆ) ದ್ವಿತೀಯ ಪಿ.ಯು.ಸಿ(ವಿಜ್ಞಾನ)/ದ್ವಿತೀಯ ಪಿ.ಯು.ಸಿ(ತಾಂತ್ರಿಕ ವಿಷಯಗಳು) ಅಂಕಪಟ್ಟಿ
ಇ) ಎಸ್.ಎಸ್.ಎಲ್.ಸಿ/ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ.
ಈ) ಮೂಲ ವರ್ಗಾವಣೆ ಪ್ರಮಾಣ ಪತ್ರ.
ಉ) ಕರ್ನಾಟಕದಲ್ಲಿ 01ನೇ ತರಗತಿಯಿಂದ 02 ವರ್ಷಗಳ ಐ.ಟಿ.ಐ/ದ್ವಿತೀಯ ಪಿ.ಯು.ಸಿ(ವಿಜ್ಞಾನ)/ದ್ವಿತೀಯ ಪಿ.ಯು.ಸಿ(ತಾಂತ್ರಿಕ ವಿಷಯಗಳು)ವರೆಗೆ ಕನಿಷ್ಠ 07 ವರ್ಷ ವ್ಯಾಸಂಗ ಮಾಡಿದ ಬಗ್ಗೆ ವ್ಯಾಸಂಗ ಪ್ರಮಾಣ ಪತ್ರ. ಈ ಪ್ರಮಾಣ ಪತ್ರವನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಅಥವಾ ಉಪ ನಿರ್ದೇಶಕರು ಇವರಿಂದ ಧೃಡೀಕರಿಸಿರಬೇಕು.
ಊ) 01ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿದ ಬಗ್ಗೆ ವ್ಯಾಸಂಗ ಪ್ರಮಾಣ ಪತ್ರ. ಈ ಪ್ರಮಾಣ ಪತ್ರವನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಅಥವಾ ಉಪ ನಿರ್ದೇಶಕರು ಇವರಿಂದ ಧೃಡೀಕರಿಸಿರಬೇಕು. ಹಾಗೂ ಕನ್ನಡ ಮಾಧ್ಯಮ / ಗ್ರಾಮೀಣ ಕೋಟಾದಡಿ ಪ್ರವೇಶ ಬಯಸುವ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರವನ್ನು ಸಲ್ಲಿಸುವುದು. (ಗ್ರಾಮೀಣ ಕೋಟಾದಡಿ ಪ್ರವೇಶ ಬಯಸುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು **"ಪರಿಶೀಲನಾ ಪ್ರಮಾಣ ಪತ್ರ"** ಸಲ್ಲಿಸತಕ್ಕದ್ದು).
ಋ) ಮೀಸಲಾತಿಯಡಿ ಕ್ಲೇಮು ಮಾಡುವ ಅಭ್ಯರ್ಥಿಗಳು ಮೂಲ ಜಾತಿ ಪ್ರಮಾಣ ಪತ್ರವನ್ನು ಮತ್ತು ಆದಾಯ ಪ್ರಮಾಣ ಪತ್ರವನ್ನು ನೋಡಲ್ ಸೆಂಟರ್‌ಗಳಲ್ಲಿ ಪ್ರವೇಶ ಸಮಯದಲ್ಲಿ ಕಡ್ಡಾಯವಾಗಿ ಸಲ್ಲಿಸಬೇಕು. ಮೀಸಲಾತಿ/ಆದಾಯ ಪ್ರಮಾಣ ಪತ್ರ ಸಲ್ಲಿಸದೇ ಇರುವ ಅಭ್ಯರ್ಥಿಗಳು ನಿಯಮಗಳ ಪ್ರಕಾರ ಪ್ರವೇಶಕ್ಕೆ ಇರಬೇಕಾದ ಇತರೇ ಅರ್ಹತೆಗಳನ್ನು ಪೂರೈಸಿದ್ದಲ್ಲಿ ಸಾಮಾನ್ಯ ಗುಂಪಿನಡಿ ಪರಿಗಣಿಸಲಾಗುವುದು
ಎ) ವೈದ್ಯಕೀಯ ಪ್ರಮಾಣ ಪತ್ರವನ್ನು ನೊಂದಾಯಿಸಿದ ಅಧೀಕೃತ ವೈದ್ಯರಿಂದ ಪಡೆದು ಸಲ್ಲಿಸಬೇಕು.
ಏ) ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 04 ಭಾವಚಿತ್ರಗಳು.

**ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದ ಶುಲ್ಕ:**

ಸರ್ಕಾರದ ಆದೇಶ ಸಂಖ್ಯೆ. ಇಡಿ 119 ಟಿಪಿಇ 2005, ದಿನಾಂಕ:18-10-2005 ಮತ್ತು ಸರ್ಕಾರದ ಆದೇಶ ಸಂಖ್ಯೆ. ಇಡಿ 10 ಟಿಪಿಇ 2012, ದಿನಾಂಕ:29-05-2012 ಹಾಗೂ ಸರ್ಕಾರದ ಪತ್ರ ಸಂ. ಇಡಿ 101 ಟಿಪಿಇ 2018, ದಿ:30-06-2018ರನ್ವಯ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಅನುದಾನರಹಿತ ಪಾಲಿಟೆಕ್ನಿಕ್‌ಗಳಿಗೆ ಅನ್ವಯವಾಗುವಂತೆ ಕೆಳಕಂಡ ಶುಲ್ಕವನ್ನು ನಿಗದಿಪಡಿಸಲಾಗಿದೆ.

| ಕ್ರ. ಸಂ. | ಪಾಲಿಟೆಕ್ನಿಕ್ | ಬೋಧನಾ ಶುಲ್ಕ | ಅಭಿವೃದ್ಧಿ ಶುಲ್ಕ | ಇತರೆ ಶುಲ್ಕ | ಒಟ್ಟು |
|---|---|---|---|---|---|
| 1. | ಸರ್ಕಾರಿ ಪಾಲಿಟೆಕ್ನಿಕ್ | ₹ 2,940/- | ₹ 500/- | ₹ 830/- | ₹ 4,270/- |
| 2. | ಅನುದಾನಿತ ಪಾಲಿಟೆಕ್ನಿಕ್ | ₹ 5,618/- | ₹ 500/- | ₹ 830/- | ₹ 6,948/- |

* ಎನ್.ಎಸ್.ಎಸ್ ಘಟಕ ಇರುವ ಸಂಸ್ಥೆಗಳು ಮೇಲ್ಕಂಡ ಇತರೆ ಶುಲ್ಕದ ಜೊತೆಗೆ ರೂ.40/-ನ್ನು ಎಲ್ಲಾ ವಿದ್ಯಾರ್ಥಿಗಳಿಂದ ಪ್ರವೇಶ ಸಮಯದಲ್ಲಿ ಪಾವತಿಸಿಕೊಳ್ಳತಕ್ಕದ್ದು.

** ಎನ್.ಎಸ್.ಎಸ್ ಘಟಕ ಇಲ್ಲದ ಸಂಸ್ಥೆಗಳು ಮೇಲ್ಕಂಡ ಇತರೆ ಶುಲ್ಕದ ಜೊತೆಗೆ ರೂ.50/-ನ್ನು ಎಲ್ಲಾ ವಿದ್ಯಾರ್ಥಿಗಳಿಂದ ಪ್ರವೇಶ ಸಮಯದಲ್ಲಿ ಪಾವತಿಸಿಕೊಳ್ಳತಕ್ಕದ್ದು.

ಮೇಲೆ ನಮೂದಿಸಿರುವಂತೆ ಇಂದೇ / ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ದಿ:31-07-2019ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಸರ್ಕಾರಿ/ಅನುದಾನಿತ ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಆಫ್-ಲೈನ್ ಮುಖಾಂತರ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ 03ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ನಿರ್ದೇಶನಾಲಯಕ್ಕೆ ವರದಿ ಮಾಡುವುದು.

ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ನಿರ್ದೇಶಕರು

16/7/19

| | |
|---|---|
| ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ – | ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಸ್ಥಳೀಯ ದಿನಪತ್ರಿಕೆಯಲ್ಲಿ ಜಾಹಿರಾತು ನೀಡಿ ನಿಯಮಗಳ ಪ್ರಕಾರ ರೋಸ್ಟರ್ ಮತ್ತು ಮೆರಿಟ್‌ಗನುಗುಣವಾಗಿ ತಮ್ಮ ಹಂತದಲ್ಲಿಯೇ ದಿ:31-07-2019ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. |

**ಪ್ರತಿ:**

1) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2) ಕಾರ್ಯದರ್ಶಿಗಳು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3) ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ.
4) ನಿರ್ದೇಶಕರ ಆಪ್ತಶಾಖೆಗೆ,
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂ.ಶಿ.ನಿ. ಬೆಂಗಳೂರು.
6) ಎಸ್‌ಟಿಐಎಲ್, ಡಿಪಿಪಿ(1) ಮತ್ತು ಡಿಪಿಪಿ(2)
7) ಇಆರ್‌ಎಸ್ ವಿಭಾಗಕ್ಕೆ – ಮೇಲ್ಕಂಡ ಅವಧಿಯಲ್ಲಿ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ನೀಡುವ ಬಗ್ಗೆ ನಿಯಮಗಳ ಪ್ರಕಾರ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.
8) ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪ್ರವೇಶಾಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
9) ಕಡತಕ್ಕೆ.

**Registration Fee**
**General - ₹ 100/-**
**SC/ST/CAT-1 - ₹ 50/-**

GOVERNMENT OF KARNATAKA
DIRECTORATE OF TECHNICAL EDUCATION

**LATERAL ENTRY APPLICATION FORM FOR OFF-LINE INTERACTIVE ADMISSION TO 3RD SEMESTR/2ND YEAR DIPLOMA COURSES FOR THE YEAR 2019-20**

(Before filling the application form, Please read the item – wise instructions as given in the brochure)

**42. RECENT PASPORT SIZE COLOR PHOTO**

1. SATS No.
2. Name of the candidate
4. Date of Birth
5. Name of the Mather
6. Name of the Father
7. Gender
   Male ☐ Female ☐ Others ☐
8. Address
   Name ........................................
   Address ........................................
   City ........................................
   State ........................................
   Pin Code
9. Telephone Number
   a) Landline
   b) Mobile
   c) E-mail
10. Indian Nationality ☐ YES ☐ NO
11. Religion
12. Mother Tongue
14. Qualifying Examination ☐ SSLC ☐ CBSE ☐ ICSE ☐ Others
15. Native State Code
16. Native District Code
17. Code of the State Appeared for SSLC / Equivalent
18. Code of the State Appeared for 2 Year ITI/2nd Year PUC
19. Code of the District Appeared for 2 Year ITI/2nd Year PUC
20. No.of Years Studied in Karnataka
21. ITI Register No.
22. ITI Year of Passing
23. ITI Trade
24. ITI Total Max Marks in all Sub
25. ITI Total Marks obtained in all Sub
26. ITI Percentage
27. PUC Register No.
28. PUC Year of Pass
29. 2nd PUC Total Max Marks in all Sub
30. 2nd PUC Total Marks obtained in all Sub
31. 2nd PUC Percentage
32. SSLC Register No.
33. Total Max Marks in all Sub
34. Total Marks obtained in all Sub
35. SSLC Percentage
36. Marks in Maths
37. Marks in Science
38. Total Max Marks in Maths & Science
39. Total Marks obtained in Maths & Science
40. Claiming Exemption From 07 Years Study Rule ☐ Yes ☐ No
41. If Yes Mention Clause Code
42. Claiming Rural Quota ☐ Yes ☐ No
43. Claiming Kannada Medium Quota ☐ Yes ☐ No
44. Registration Appl. Fee
45. Receipt No.
46. Registration Fee Paid Date
47. Reservation Category
48. Name of the Caste
49. Annual Income

**DECLARATION**

We declare that the information furnished is true and correct to the best of our knowledge

**Signature of the Parent/Guardian**

**Signature of the Candidate**